## ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

**ವಿಷಯದ ಸಂಖ್ಯೆ: 3 (631)/2009-10**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:5, ಮಲ್ಲೇಶ್ವರಂ ಈಜುಕೊಳದ ಬಡಾವಣೆ 4ನೇ ಅಡ್ಡರಸ್ತೆಗೆ "ಶ್ರೀ ಚಿಂತಲಪಲ್ಲಿ ರಾಮಚಂದ್ರರಾವ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ:13/01/2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:540/2009-10 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:01/02/2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆಗಳು ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:5, ಮಲ್ಲೇಶ್ವರಂ ಈಜುಕೊಳದ ಬಡಾವಣೆ, 4ನೇ ಅಡ್ಡರಸ್ತೆಗೆ "ಶ್ರೀ ಚಿಂತಲಪಲ್ಲಿ ರಾಮಚಂದ್ರರಾವ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:03-05-2010 ರ ಟಿಪ್ಪಣಿ.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯವನ್ನು ಮಂಡಿಸಿದರು

ನಿರ್ಣಯ:- ದಿನಾಂಕ: 03-05-2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪುವುದು.

ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು

ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.

ನಿರ್ಣಯ:- ದಿನಾಂಕ: 03-05-2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿದೆ.

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

### ವಿಷಯದ ಸಂಖ್ಯೆ: 2 (630)/2009-10

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:5 (ಹೊಸ:65), ಮಲ್ಲೇಶ್ವರಂ, 16ನೇ ಅಡ್ಡರಸ್ತೆಗೆ "ಶ್ರೀಮತಿ ಗಂಗೂಬಾಯಿ ಹಾನಗಲ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ:13/01/2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:545/2009–10 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:1/2/2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆಗಳು ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ: 5 (ಹೊಸ:65), ಮಲ್ಲೇಶ್ವರಂ, 16ನೇ ಅಡ್ಡರಸ್ತೆಗೆ "ಶ್ರೀಮತಿ ಗಂಗೂಬಾಯಿ ಹಾನಗಲ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳುವ ಬಗ್ಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:03–05–2010ರ ಟಿಪ್ಪಣಿ.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯವನ್ನು ಮಂಡಿಸಿದರು

ನಿರ್ಣಯ:- ದಿನಾಂಕ: 03–05–2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪುವುದು.

ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು

ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.

ನಿರ್ಣಯ:- ದಿನಾಂಕ: 03–05–2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿದೆ.

(ಎಸ್.ಕೆ. ನಟರಾಜು)
ಮಹಾಪೌರರು

## ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

### ವಿಷಯದ ಸಂಖ್ಯೆ: 1(629)/2009-10

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:7, ಮಲ್ಲೇಶ್ವರಂ ವ್ಯಾಪ್ತಿಗೆ ಬರುವ ಯಶವಂತಪುರ ಮೇಲು ಸೇತುವೆಗೆ "ಶ್ರೀ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಮೇಲ್ಸೆತುವೆ" ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ:13/01/2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:554/2009–10 ರಲ್ಲಿ, ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿ:01/02/2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ, ಆಕ್ಷೇಪಣೆಗಳು ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ: 7, ಮಲ್ಲೇಶ್ವರಂ ವ್ಯಾಪ್ತಿಗೆ ಬರುವ ಯಶವಂತಪುರ ಮೇಲು ಸೇತುವೆಗೆ "ಶ್ರೀ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ಮೇಲ್ಸೆತುವೆ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:03–05–2010 ರ ಟಿಪ್ಪಣಿ.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯವನ್ನು ಮಂಡಿಸಿದರು

ನಿರ್ಣಯ:- ದಿನಾಂಕ: 03-05-2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪುವುದು.

ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು

ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.

ನಿರ್ಣಯ:- ದಿನಾಂಕ: 03-05-2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿದೆ.

ಎಸ್.ಕೆ.ನಟರಾಜ್

(ಎಸ್.ಕೆ.ನಟರಾಜು)

ಮಹಾಪೌರರು

# ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

## ವಿಷಯದ ಸಂಖ್ಯೆ: 4 (632)/2009-10

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:9, ಸುಬ್ರಮಣ್ಯನಗರ ರೈಲ್ವೆ ಸಮಾನಾಂತರ ರಸ್ತೆಗೆ "ಶ್ರೀ ವೀರ ಸಾರ್ವಕರ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ:13/01/2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:545/2009–10 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:01/02/2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ: 9, ಸುಬ್ರಮಣ್ಯನಗರ ರೈಲ್ವೆ ಸಮಾನಾಂತರ ರಸ್ತೆಗೆ "ಶ್ರೀ ವೀರ ಸಾರ್ವಕರ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:03–05–2010 ರ ಟಿಪ್ಪಣಿ.

**ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯವನ್ನು ಮಂಡಿಸಿದರು**

**ನಿರ್ಣಯ:– ದಿನಾಂಕ: 03–05–2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪುವುದು.**

**ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು**

**ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.**

**ನಿರ್ಣಯ:– ದಿನಾಂಕ: 03–05–2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿದೆ.**

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)

ಮಹಾಪೌರರು

## ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

### ವಿಷಯದ ಸಂಖ್ಯೆ: 7 (635)/2009-10

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:99, ಅರಮನೆ ನಗರ ವ್ಯಾಪ್ತಿಗೆ ಬರುವ ವೈಯಾಲಿಕಾವಲ್ ಆಟದ ಮೈದಾನಕ್ಕೆ "ಶ್ರೀ ಕರ್ನಲ್ ವಸಂತ್ ಕ್ರೀಡಾಂಗಣ" ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ:13/01/2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:564/2009-10 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:01/02/2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳನ್ನು ಸ್ವೀಕರಿಸಲಾಗಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ: 99, ಅರಮನೆ ನಗರ ವ್ಯಾಪ್ತಿಗೆ ಬರುವ ವೈಯಾಲಿ ಕಾವಲ್ ಆಟದ ಮೈದಾನಕ್ಕೆ "ಶ್ರೀ ಕರ್ನಲ್ ವಸಂತ್ ಕ್ರೀಡಾಂಗಣ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:03-05-2010 ರ ಟಿಪ್ಪಣಿ.

**ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯವನ್ನು ಮಂಡಿಸಿದರು**

**ನಿರ್ಣಯ:- ದಿನಾಂಕ: 03-05-2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪುವುದು.**

**ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು**

**ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.**

**ನಿರ್ಣಯ:- ದಿನಾಂಕ: 03-05-2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿದೆ.**

ಎಸ್.ಕೆ. ನಟರಾಜ

(ಎಸ್.ಕೆ.ನಟರಾಜ)

ಮಹಾಪೌರರು

# ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

## ವಿಷಯದ ಸಂಖ್ಯೆ: 9 (31)/2010-11

ಟಿಪ್ಪಣಿಯಲ್ಲಿ ಮಂಡಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:54, ವಿದ್ಯಾಪೀಠ ವೃತ್ತದಿಂದ ಹಾಗೂ ಕತ್ರಿಗುಪ್ಪೆ ಮುಖ್ಯರಸ್ತೆ ಮುಖಾಂತರ ವರ್ತುಲ ರಸ್ತೆವರೆಗೆ ಪೇಜಾವರ ಮಠಾಧೀಶರಾದ " ಶ್ರೀ ವಿಶ್ವೇಶತೀರ್ಥ ಸ್ವಾಮಿಜಿ ರಸ್ತೆ " ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ 17-12-2008 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ : 817 /08-09 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ ಒಂದು ತಿಂಗಳ ಕಾಲಾವಕಾಶದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶಗಳು ಇದ್ದು ಈ ಅವಧಿಯಲ್ಲಿ ಶ್ರೀ ಎಂ.ನಿಜಾಲುದ್ದಿನ್ ಖಾನ್ ರವರು ಆಕ್ಷೇಪಣೆ ಅರ್ಜಿ ಸಲ್ಲಿಸಿ, ಈ ಹಿಂದೆ ಇದ್ದಂತಹ ನಾಮಕರಣ ಸಂಬಂಧದ ಮಾರ್ಗಸೂಚಿ ಅನ್ವಯ ಜೀವಂತ ವ್ಯಕ್ತಿಗಳ ಹೆಸರುಗಳನ್ನು ನಾಮಕರಣ ಮಾಡಲು ಅವಕಾಶವಿಲ್ಲವೆಂದು ಹಾಗೂ ಜನಪ್ರತಿನಿಧಿಗಳು ಇಲ್ಲದ ಸಂದರ್ಭದಲ್ಲಿ ಆಡಳಿತಗಾರರ ಅವಧಿಯಲ್ಲಿ ನಾಮಕರಣ ಮಾಡುವುದು ಸೂಕ್ತವಲ್ಲವೆಂದು ತಿಳಿಸಿರುತ್ತಾರೆ ಹಾಗೂ ಶ್ರೀ ವಿಶ್ವೇಶತೀರ್ಥ ಸ್ವಾಮಿಜಿ ರವರು ಜಾತ್ಯಾತೀತವೆಂದು ಮತ್ತು ಸಂಘ ಪರಿವಾರ ಸಂಸ್ಥೆಗಳ ಒಡನಾಟ ಇರುವುದರಿಂದ ಸದರಿಯವರ ಹೆಸರನ್ನು ನಾಮಕರಣ ಮಾಡುವುದು ಸೂಕ್ತವಲ್ಲವೆಂದು ತಿಳಿಸಿರುತ್ತಾರೆ.

ಪ್ರಸ್ತುತ ಕರ್ನಾಟಕ ಸರ್ಕಾರವು ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಅಧಿನಿಯಮ 1976ರ (1977ರ ಕರ್ನಾಟಕ ಅಧಿನಿಯಮ 14) 421ನೇ ಪ್ರಕರಣಕ್ಕೆ ನಿಯಮಗಳನ್ನು ರೂಪಿಸಿರುತ್ತದೆ. ಸದರಿ ನಿಯಮಾವಳಿಯಂತೆ ಸಾರ್ವಜನಿಕ ಸ್ಥಳಕ್ಕೆ ನಾಮಕರಣ ಮಾಡುವಾಗ ಪ್ರಖ್ಯಾತ ವ್ಯಕ್ತಿಗಳ, ವಿಶಿಷ್ಟ ವ್ಯಕ್ತಿಯ ಹೆಸರುಗಳನ್ನು ಬಳಸತಕ್ಕದ್ದು. ಹಾಗೂ ಜೀವಂತ ವ್ಯಕ್ತಿಗಳ ಹೆಸರುಗಳನ್ನು ನಾಮಕರಣ ಮಾಡಲು ಅವಕಾಶವಿರುತ್ತದೆ. ಈ ಹೆಸರುಗಳನ್ನು ಸಾರ್ವಜನಿಕ ಸೇವೆ, ಸಾಹಿತ್ಯ, ಕಲೆ, ಶಿಕ್ಷಣ ಕ್ರೀಡೆಗಳ ಕ್ಷೇತ್ರದಲ್ಲಿ ಬಹುತೇಕ ಆ ಪ್ರದೇಶದವರೇ ಆಗಿರುವ, ಗಣನೀಯ ಸೇವೆ ಸಲ್ಲಿಸಿರುವ ಪ್ರಮುಖ ವ್ಯಕ್ತಿಗಳ ಹೆಸರುಗಳಿಂದ ಅಥವಾ ಐತಿಹಾಸಿಕ ಪ್ರಾಮುಖ್ಯತೆಯುಳ್ಳ ವ್ಯಕ್ತಿಗಳು ಅಥವಾ ಘಟನೆಗಳಿಂದ ಸುದೀರ್ಘ ಕಾಲದಿಂದ ಜನಪ್ರಿಯವಾಗಿ ಬಳಕೆಯಲ್ಲಿರುವ ಹೆಸರನ್ನು ನಾಮಕರಣ ಮಾಡಲು ಅವಕಾಶವಿರುತ್ತದೆ. ಶ್ರೀ ವಿಶ್ವೇಶತೀರ್ಥ ಸ್ವಾಮಿಜಿ ರವರು ಧಾರ್ಮಿಕ, ಸಾಮಾಜಿಕ, ಆರೋಗ್ಯ ಇತ್ಯಾದಿಗಳಲ್ಲಿ ವಿಶಿಷ್ಟ ಸೇವೆ ಸಲ್ಲಿಸಿ ಜನಪ್ರಿಯ ವ್ಯಕ್ತಿಯಾಗಿರುತ್ತಾರೆ.

# ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

## ವಿಷಯದ ಸಂಖ್ಯೆ: 6 (634)/2009-10

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್:7 ಮತ್ತು ವಾರ್ಡ್:9 ರ ಸುಬ್ರಮಣ್ಯನಗರ ವ್ಯಾಪ್ತಿಗೆ ಬರುವ ಮಲ್ಲೇಶ್ವರಂ 17ನೇ (ವೈಟ್ ಹಾರ್ಸ್ ರಸ್ತೆ) ಅಡ್ಡರಸ್ತೆಗೆ "ಶ್ರೀ.ರವಿ ಕಿರ್ಲೋಸ್ಕರ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ದಿ:13/01/2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:551/2009–10 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿ:01/02/2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಶ್ರೀ.ಶಿವಕುಮಾರ ಹೊಸಮನಿ, ಪ್ರಧಾನ ಕಾರ್ಯದರ್ಶಿಗಳು, ಸಮರ್ಪಣ ಸಮಾಜ ಸ್ಪಂದನಾ ಸಂಘ ರವರು ಮನವಿ ಪತ್ರ ಸಲ್ಲಿಸಿ, ನಾಮಕರಣ ಮಾಡಲು ಉದ್ದೇಶಿಲಾಗಿರುವ ವ್ಯಕ್ತಿಗಳು ಸಮಾಜಕ್ಕೆ ಏನು ಕೊಡುಗೆ ಮಾಡಿರುತ್ತಾರೆ ಎಂಬುದರ ಬಗ್ಗೆ ತಿಳಿಯಪಡಿಸಿದ ನಂತರ ಅಗತ್ಯವೆನಿಸಿದರೆ ಮಾತ್ರ ಆಕ್ಷೇಪಣೆ ಸಲಿಸುತ್ತೇನೆ ಎಂದು ತಿಳಿಸಿರುತ್ತಾರೆ. ಈ ಸಂಬಂಧ ನಾಮಕರಣ ಮಾಡಲು ಉದ್ದೇಶಿಸಲಾಗಿರುವ ವ್ಯಕ್ತಿಗಳ ಪರಿಚಯ/ಕೊಡುಗೆಯ ಮಾಹಿತಿಗಳನ್ನು ಅರ್ಜಿದಾರರಿಗೆ ದಿ:04/03/2010 ರಂದು ನೀಡಲಾಗಿರುತ್ತದೆ. ಮುಂದುವರೆದಂತೆ, ಅರ್ಜಿದಾರರಿಂದ ಇದುವರೆವಿಗೂ ಯಾವುದೇ ಆಕ್ಷೇಪಣೆ ಮತ್ತು ಸಲಹೆಗಳನ್ನು ಸ್ವೀಕರಿಸಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್:7 ಮತ್ತು ವಾರ್ಡ್:9 ರ ಸುಬ್ರಮಣ್ಯನಗರ ವ್ಯಾಪ್ತಿಗೆ ಬರುವ ಮಲ್ಲೇಶ್ವರಂ 17ನೇ ಅಡ್ಡರಸ್ತೆಗೆ (ವೈಟ್ ಹಾರ್ಸ್ ರಸ್ತೆ)" ಶ್ರೀ.ರವಿ ಕಿರ್ಲೋಸ್ಕರ್ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿ:03/05/2010ರ ಟಿಪ್ಪಣಿ.

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯವನ್ನು ಮಂಡಿಸಿದರು

ನಿರ್ಣಯ:– ದಿನಾಂಕ: 03–05–2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪುವುದು.

ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು

ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.

ನಿರ್ಣಯ:– ದಿನಾಂಕ: 03–05–2010ರ ಆಯುಕ್ತರ ಟಿಪ್ಪಣಿಯನ್ನು ಒಪ್ಪಿದೆ.

(ಎಸ್.ಕೆ.ನಟರಾಜು)

ಮಹಾಪೌರರು

# ದಿನಾಂಕ:29-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ನಡವಳಿಗಳು

**ವಿಷಯದ ಸಂಖ್ಯೆ: 44/2010–11**

ಆಡಳಿತ ಪಕ್ಷದ ನಾಯಕರಾದ ಶ್ರೀ ಬಿ.ಎಸ್. ಸತ್ಯನಾರಾಯಣರವರು ಕೆಳಕಂಡ ನಿರ್ಣಯಗಳನ್ನು ಮಂಡಿಸಿದರು.

ನಿರ್ಣಯ:– ಕೆಳಗೆ ಕಾಣಿಸಿರುವ ರಸ್ತೆಗಳಿಗೆ ನಾಮಕರಣ ಮಾಡುವ ಬಗ್ಗೆ ಆಯುಕ್ತರು ಕ್ರಮ ತೆಗೆದುಕೊಳ್ಳುವುದು.

1. ಮಹಾಲಕ್ಷ್ಮಿಬಡಾವಣೆ ಎಂಟ್ರೆನ್ಸ್ ವೃತ್ತಕ್ಕೆ ಇಸ್ಕಾನ್ ಟೆಂಪಲ್ ವೃತ್ತವೆಂದು ನಾಮಕರಣ ಮಾಡುವುದು.
2. ಜಯನಗರ 5ನೇ ಬಡಾವಣೆಯ 5ನೇ ಮುಖ್ಯ ರಸ್ತೆಯಿಂದ 11ನೇ ಮುಖ್ಯ ರಸ್ತೆಯವರೆವಿಗಿನ 36ನೇ ಅಡ್ಡ ರಸ್ತೆಗೆ "ಪ್ರೊ.ಎಂ.ಗೋಪಾಲಕೃಷ್ಣ ಅಡಿಗ ರಸ್ತೆ" ಎಂದು ನಾಮಕರಣ ಮಾಡುವುದು.
3. ಜಯನಗರ 5ನೇ ಮುಖ್ಯ ರಸ್ತೆಯಿಂದ 11ನೇ ಮುಖ್ಯ ರಸ್ತೆವರೆಗಿನ 46ನೇ ಅಡ್ಡ ರಸ್ತೆಗೆ "ದಾಸವರೇಣ್ಯ ಕನಕದಾಸ ರಸ್ತೆ" ಎಂದು ನಾಮಕರಣ ಮಾಡುವುದು.
4. ಜಯನಗರ 5ನೇ ಬಡಾವಣೆಯ 9ನೇ ಮುಖ್ಯ ರಸ್ತೆಯಿಂದ 46ನೇ ಅಡ್ಡ ರಸ್ತೆವರೆಗಿನ 40ನೇ ಅಡ್ಡ ರಸ್ತೆಗೆ "ಸ್ವಾಮಿ ವಿವೇಕಾನಂದ ಮಾರ್ಗ" ಎಂದು ನಾಮಕರಣ ಮಾಡುವುದು.
5. ಜೆ.ಪಿ. ನಗರದ (ಆರ್.ವಿ. ದಂತ ಮಹಾ ವಿದ್ಯಾಲಯವಿರುವ) ಮೊದಲನೆ ಹಂತದ 24ನೇ ಮುಖ್ಯ ರಸ್ತೆಯ 5ನೇ ಅಡ್ಡ ರಸ್ತೆಗೆ "ಶ್ರೀ ಡಿ.ಎ. ಪಾಂಡು ರಸ್ತೆ" ಎಂದು ನಾಮಕರಣ ಮಾಡುವುದು.

6. ಜಯನಗರ 4ನೇ ಬ್ಲಾಕ್‌ನ 32ನೇ ಅಡ್ಡ ರಸ್ತೆಯಿಂದ 39ನೇ ಅಡ್ಡ ರಸ್ತೆಯವರೆಗಿನ 16ನೇ ಮುಖ್ಯ ರಸ್ತೆಗೆ "ಶ್ರೀ ಬಿ.ಎಲ್. ಲಕ್ಕೇಗೌಡ ರಸ್ತೆ" ಎಂದು ನಾಮಕರಣ ಮಾಡುವುದು.

**ಶ್ರೀ ಬಿ.ಎಸ್. ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಶ್ರೀ ಪಿ.ಎನ್. ಸದಾಶಿವರವರು ಅನುಮೋದಿಸಿದರು**

**ಮಹಾಪೌರರು ನಿರ್ಣಯವನ್ನು ಮತಕ್ಕೆ ಹಾಕಲಾಗಿ ಸಭೆಯು ಬಹುಮತದಿಂದ ಒಪ್ಪಿದೆ ಎಂದು ತೀರ್ಮಾನಿಸಿತು.**

ನಿರ್ಣಯ:– ಕೆಳಗೆ ಕಾಣಿಸಿರುವ ರಸ್ತೆಗಳಿಗೆ ನಾಮಕರಣ ಮಾಡುವ ಬಗ್ಗೆ ಆಯುಕ್ತರು ಕ್ರಮ ತೆಗೆದುಕೊಳ್ಳುವುದು.

1. ಮಹಾಲಕ್ಷ್ಮಿಬಡಾವಣೆ ಎಂಟ್ರೆನ್ಸ್ ವೃತ್ತಕ್ಕೆ ಇಸ್ಕಾನ್ ಟೆಂಪಲ್ ವೃತ್ತವೆಂದು ನಾಮಕರಣ ಮಾಡುವುದು.
2. ಜಯನಗರ 5ನೇ ಬಡಾವಣೆಯ 5ನೇ ಮುಖ್ಯ ರಸ್ತೆಯಿಂದ 11ನೇ ಮುಖ್ಯ ರಸ್ತೆಯವರೆವಿಗಿನ 36ನೇ ಅಡ್ಡ ರಸ್ತೆಗೆ "ಪ್ರೊ.ಎಂ.ಗೋಪಾಲಕೃಷ್ಣ ಅಡಿಗ ರಸ್ತೆ" ಎಂದು ನಾಮಕರಣ ಮಾಡುವುದು.
3. ಜಯನಗರ 5ನೇ ಮುಖ್ಯ ರಸ್ತೆಯಿಂದ 11ನೇ ಮುಖ್ಯ ರಸ್ತೆವರೆಗಿನ 46ನೇ ಅಡ್ಡ ರಸ್ತೆಗೆ "ದಾಸವರೇಣ್ಯ ಕನಕದಾಸ ರಸ್ತೆ" ಎಂದು ನಾಮಕರಣ ಮಾಡುವುದು.
4. ಜಯನಗರ 5ನೇ ಬಡಾವಣೆಯ 9ನೇ ಮುಖ್ಯ ರಸ್ತೆಯಿಂದ 46ನೇ ಅಡ್ಡ ರಸ್ತೆವರೆಗಿನ 40ನೇ ಅಡ್ಡ ರಸ್ತೆಗೆ "ಸ್ವಾಮಿ ವಿವೇಕಾನಂದ ಮಾರ್ಗ" ಎಂದು ನಾಮಕರಣ ಮಾಡುವುದು.
5. ಜೆ.ಪಿ. ನಗರದ (ಆರ್.ವಿ. ದಂತ ಮಹಾ ವಿದ್ಯಾಲಯವಿರುವ) ಮೊದಲನೆ ಹಂತದ 24ನೇ ಮುಖ್ಯ ರಸ್ತೆಯ 5ನೇ ಅಡ್ಡ ರಸ್ತೆಗೆ "ಶ್ರೀ ಡಿ.ಎ. ಪಾಂಡು ರಸ್ತೆ" ಎಂದು ನಾಮಕರಣ ಮಾಡುವುದು.

6. ಜಯನಗರ 4ನೇ ಬ್ಲಾಕ್‌ನ 32ನೇ ಅಡ್ಡ ರಸ್ತೆಯಿಂದ 39ನೇ ಅಡ್ಡ ರಸ್ತೆಯವರೆಗಿನ 16ನೇ ಮುಖ್ಯ ರಸ್ತೆಗೆ "ಶ್ರೀ ಬಿ.ಎಲ್. ಲಕ್ಕೇಗೌಡ ರಸ್ತೆ" ಎಂದು ನಾಮಕರಣ ಮಾಡುವುದು.

ಎಸ್. ಕೆ. ನಟರಾಜ

(ಎಸ್.ಕೆ. ನಟರಾಜ)

ಮಹಾಪೌರರು

## ದಿನಾಂಕ:29-10-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

**ವಿಷಯದ ಸಂಖ್ಯೆ: 3 (97)/2010-11**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್:65, (ಹಳೆಯ ವಾರ್ಡ್ ಸಂಖ್ಯೆ:7) ಮಲ್ಲೇಶ್ವರಂ 6ನೇ ಅಡ್ಡರಸ್ತೆಗೆ "ಡಾ|| ಹೊ.ಶ್ರೀನಿವಾಸಯ್ಯ ರಸ್ತೆ" ಎಂದು ನಾಮಕರಣ ಮಾಡಲು ದಿನಾಂಕ:29-05-2010 ರಂದು ನಡೆದ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ವಿಷಯದ ಸಂಖ್ಯೆ: 24/2010-11 ರಲ್ಲಿ ತೀರ್ಮಾನಿಸಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು/ಸಲಹೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:20-06-2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಯಾವುದೇ ಆಕ್ಷೇಪಣೆಗಳು ಸ್ವೀಕರಿಸಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್:65, (ಹಳೆಯ ವಾರ್ಡ್ ಸಂಖ್ಯೆ: 7), ಮಲ್ಲೇಶ್ವರಂ, 6ನೇ ಅಡ್ಡರಸ್ತೆಗೆ "ಡಾ|| ಹೊ.ಶ್ರೀನಿವಾಸಯ್ಯ ರಸ್ತೆ" ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:18-09-2010 ರ ಟಿಪ್ಪಣಿ.

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಆಯುಕ್ತರವರ ದಿನಾಂಕ:18-09-2010 ರ ಟಿಪ್ಪಣಿಯನ್ನು ಒಪ್ಪುವುದು".

ಶ್ರೀ.ಗಂಗಭೈರಯ್ಯರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಆಯುಕ್ತರವರ ದಿನಾಂಕ:18-09-2010ರ ಟಿಪ್ಪಣಿಯನ್ನು ಒಪ್ಪುವುದೆಂದು ತೀರ್ಮಾನಿಸಲಾಯಿತು".

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:28-08-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

**ವಿಷಯದ ಸಂಖ್ಯೆ:85/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಶಾಕಾಂಬರಿ ನಗರ 179ನೇ ವಾರ್ಡಿನ ವ್ಯಾಪ್ತಿಯ ಜೆ.ಪಿ.ನಗರದ (ಆರ್.ವಿ.ದಂತ ಮಹಾ ವಿದ್ಯಾಲಯವಿರುವ) ಮೊದಲನೇ ಹಂತದ 24ನೇ ಮುಖ್ಯ ರಸ್ತೆಯ 5ನೇ ಅಡ್ಡ ರಸ್ತೆಗೆ "ಶ್ರೀ ಡಿ.ಎ. ಪಾಂಡು ರಸ್ತೆ" ಎಂದು ನಾಮಕರಣ ಮಾಡುವುದು.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ಸೂಚನೆಯನ್ನು ಮತಕ್ಕೆ ಹಾಕಲಾಗಿ ಸೂಚನೆಯು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಶಾಕಾಂಬರಿ ನಗರ 179ನೇ ವಾರ್ಡಿನ ವ್ಯಾಪ್ತಿಯ ಜೆ.ಪಿ.ನಗರದ (ಆರ್.ವಿ.ದಂತ ಮಹಾ ವಿದ್ಯಾಲಯವಿರುವ) ಮೊದಲನೇ ಹಂತದ 24ನೇ ಮುಖ್ಯ ರಸ್ತೆಯ 5ನೇ ಅಡ್ಡ ರಸ್ತೆಗೆ "ಶ್ರೀ ಡಿ.ಎ. ಪಾಂಡು ರಸ್ತೆ" ಎಂದು ನಾಮಕರಣ ಮಾಡುವುದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

ಎಸ್.ಕೆ.ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು

## ದಿನಾಂಕ:29-10-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

**ವಿಷಯದ ಸಂಖ್ಯೆ:135/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಚಿಕ್ಕಪೇಟೆ ರಸ್ತೆ ಮತ್ತು ಬಿ.ವಿ.ಕೆ. ಅಯ್ಯಂಗಾರ್ ರಸ್ತೆ ಕೂಡುವ ವೃತ್ತಕ್ಕೆ ಪ್ರಾಚೀನ ಇತಿಹಾಸ ಹೊಂದಿರುವ ಹಾಗೂ ಪೂಜಾ ಕೈಂಕರ್ಯಗಳು ಮತ್ತು ಧಾರ್ಮಿಕ ಚಟುವಟಿಕೆಗಳನ್ನು ನಡೆಸುತ್ತಿರುವ ಶ್ರೀ ಮಹಂತರ ಮಠ ಹೆಸರನ್ನು ನಾಮಕರಣ ಮಾಡುವ ಕುರಿತು ಮುಂದಿನ ಅಗತ್ಯ ಕ್ರಮವನ್ನು ವಹಿಸುವಂತೆ ಮಾನ್ಯ ಆಯುಕ್ತರವರಿಗೆ ಸೂಚಿಸಲಾಯಿತು.

ಶ್ರೀ.ಗಂಗಭೈರಯ್ಯ ರವರು ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಚಿಕ್ಕಪೇಟೆ ರಸ್ತೆ ಮತ್ತು ಬಿ.ವಿ.ಕೆ. ಅಯ್ಯಂಗಾರ್ ರಸ್ತೆ ಕೂಡುವ ವೃತ್ತಕ್ಕೆ ಪ್ರಾಚೀನ ಇತಿಹಾಸ ಹೊಂದಿರುವ ಹಾಗೂ ಪೂಜಾ ಕೈಂಕರ್ಯಗಳು ಮತ್ತು ಧಾರ್ಮಿಕ ಚಟುವಟಿಕೆಗಳನ್ನು ನಡೆಸುತ್ತಿರುವ ಶ್ರೀ ಮಹಂತರ ಮಠ ಹೆಸರನ್ನು ನಾಮಕರಣ ಮಾಡುವ ಕುರಿತು ಮುಂದಿನ ಅಗತ್ಯ ಕ್ರಮವನ್ನು ವಹಿಸುವಂತೆ ಮಾನ್ಯ ಆಯುಕ್ತರವರಿಗೆ ಸೂಚಿಸಲು ಸಭೆಯು ತೀರ್ಮಾನಿಸಿತು".

ಎಸ್.ಕೆ.ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು

## ದಿನಾಂಕ:29–10–2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ನಿರ್ಣಯ

**ವಿಷಯದ ಸಂಖ್ಯೆ:136/2010–11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಗಾಂಧಿನಗರ ವಾರ್ಡ್ 94 ರ ಶೇಷಾದ್ರಿಪುರಂ ಸಿರೂರ್ ಪಾರ್ಕ್ ಆಟದ ಮೈದಾನದಲ್ಲಿ ನೂತನವಾಗಿ ನಿರ್ಮಿಸಿರುವ ಒಳಾಂಗಣ ಕ್ರೀಡಾಂಗಣಕ್ಕೆ ಕರ್ನಾಟಕ ರಾಜ್ಯದ ಮುಖ್ಯ ಮಂತ್ರಿಗಳಾಗಿದ್ದ, "ಆರ್.ಗುಂಡೂರಾವ್ ಕ್ರೀಡಾ ಸಂಕೀರ್ಣ" ಎಂದು ನಾಮಕರಣ ಮಾಡುವ ಕುರಿತು, ಮುಂದಿನ ಅಗತ್ಯ ಕ್ರಮವನ್ನು ವಹಿಸುವಂತೆ ಮಾನ್ಯ ಆಯುಕ್ತರವರಿಗೆ ಸೂಚಿಸಲಾಯಿತು.

ಶ್ರೀ.ಗಂಗಭೈರಯ್ಯ ರವರು ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಗಾಂಧಿನಗರ ವಾರ್ಡ್ 94 ರ ಶೇಷಾದ್ರಿಪುರಂ ಸಿರೂರ್ ಪಾರ್ಕ್ ಆಟದ ಮೈದಾನದಲ್ಲಿ ನೂತನವಾಗಿ ನಿರ್ಮಿಸಿರುವ ಒಳಾಂಗಣ ಕ್ರೀಡಾಂಗಣಕ್ಕೆ ಕರ್ನಾಟಕ ರಾಜ್ಯದ ಮುಖ್ಯ ಮಂತ್ರಿಗಳಾಗಿದ್ದ, "ಆರ್.ಗುಂಡೂರಾವ್ ಕ್ರೀಡಾ ಸಂಕೀರ್ಣ" ಎಂದು ನಾಮಕರಣ ಮಾಡುವ ಕುರಿತು, ಮುಂದಿನ ಅಗತ್ಯ ಕ್ರಮವನ್ನು ವಹಿಸುವಂತೆ ಮಾನ್ಯ ಆಯುಕ್ತರವರಿಗೆ ಸೂಚಿಸಲು ಸಭೆಯು ತೀರ್ಮಾನಿಸಿತು".

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:27-11-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

**ವಿಷಯದ ಸಂಖ್ಯೆ: 1 (636)/2010-11**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್:9, ಸುಬ್ರಮಣ್ಯನಗರ ಮುಖ್ಯರಸ್ತೆಗೆ (10ನೇ ಅಡ್ಡರಸ್ತೆ) "ಶ್ರೀ.ಸಿ.ಎಂ.ನಾಗರಾಜ್" ರಸ್ತೆ ಎಂದು ನಾಮಕರಣ ಮಾಡುವ ಬಗ್ಗೆ ದಿನಾಂಕ:13-01-2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ:541/2009-10 ರಲ್ಲಿ ಅನುಮೋದನೆ ನೀಡಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ ಸಾರ್ವಜನಿಕರಿಂದ ಆಕ್ಷೇಪಣೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:01-02-2010 ರಂದು ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯ ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಶ್ರೀ.ಶಿವಕುಮಾರ ಹೊಸಮನಿ, ಪ್ರಧಾನ ಕಾರ್ಯದರ್ಶಿಗಳು, ಸಮರ್ಪಣ ಸಮಾಜ ಸ್ಪಂದನಾ ಸಂಘ, ರವರು ಮನವಿ ಪತ್ರ ಸಲ್ಲಿಸಿ ನಾಮಕರಣ ಮಾಡಲು ಉದ್ದೇಶಿಲಾಗಿರುವ ವ್ಯಕ್ತಿಗಳು ಸಮಾಜಕ್ಕೆ ಏನು ಕೊಡುಗೆ ನೀಡಿರುತ್ತಾರೆ ಎಂಬುದರ ಬಗ್ಗೆ ತಿಳಿಯಪಡಿಸಿದ ನಂತರ ಅಗತ್ಯವೆನಿಸಿದರೆ ಮಾತ್ರ ಆಕ್ಷೇಪಣೆ ಸಲಿಸುತ್ತೇನೆ ಎಂದು ತಿಳಿಸಿರುತ್ತಾರೆ. ಈ ಸಂಬಂಧ ನಾಮಕರಣ ಮಾಡಲು ಉದ್ದೇಶಿಸಲಾಗಿರುವ ವ್ಯಕ್ತಿಗಳ ಪರಿಚಯ/ಕೊಡುಗೆಯ ಮಾಹಿತಿಗಳನ್ನು ಅರ್ಜಿದಾರರಿಗೆ ದಿನಾಂಕ: 04-03-2010 ರಂದು ನೀಡಲಾಗಿರುತ್ತದೆ. ಮುಂದುವರೆದಂತೆ, ಅರ್ಜಿದಾರರಿಂದ ಇದುವರೆವಿಗೂ ಯಾವುದೇ ಆಕ್ಷೇಪಣೆ/ಸಲಹೆಗಳನ್ನು ಸ್ವೀಕರಿಸಿರುವುದಿಲ್ಲ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್:9, ಸುಬ್ರಮಣ್ಯನಗರ ಮುಖ್ಯರಸ್ತೆಗೆ (10ನೇ ಅಡ್ಡರಸ್ತೆ) "ಶ್ರೀ.ಸಿ.ಎಂ.ನಾಗರಾಜ್" ರಸ್ತೆ ಎಂದು ನಾಮಕರಣ ಮಾಡುವ ಬಗ್ಗೆ ಅಂತಿಮ ತೀರ್ಮಾನಕ್ಕಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:03-05-2010 ರ ಟಿಪ್ಪಣಿ.

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಆಯುಕ್ತರವರ ದಿನಾಂಕ:03-05-2010 ರ ಟಿಪ್ಪಣಿಯನ್ನು ಒಪ್ಪುವುದು".

ಶ್ರೀ.ಗಂಗಭೈರಯ್ಯ ರವರು, ಶ್ರೀ.ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಆಯುಕ್ತರವರ ದಿನಾಂಕ:03-05-2010ರ ಟಿಪ್ಪಣಿಯನ್ನು ಒಪ್ಪುವುದೆಂದು ತೀರ್ಮಾನಿಸಲಾಯಿತು".

(ಎನ್.ದಯಾನಂದ್)
ಉಪ ಮಹಾಪೌರರು

## ದಿನಾಂಕ:27-11-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

**ವಿಷಯದ ಸಂಖ್ಯೆ: 3 (98)/2010-11**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಡಾ॥ ಅಶ್ವತ್ ನಾರಾಯಣ್.ಸಿ.ಎನ್., ಶಾಸಕರು, ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರ ರವರು ಸನ್ಮಾನ್ಯ ಮುಖ್ಯಮಂತ್ರಿಗಳು ಕರ್ನಾಟಕ ಸರ್ಕಾರ ರವರಿಗೆ ದಿನಾಂಕ:07-10-2009 ರಂದು ಮನವಿ ಪತ್ರ ಸಲ್ಲಿಸಿ, ಹಳೆಯ ವಾರ್ಡ್ ಸಂಖ್ಯೆ: 7 ಮಲ್ಲೇಶ್ವರಂ ವ್ಯಾಪ್ತಿಗೆ ಬರುವ ಯಶವಂತಪುರ 1ನೇ ಮುಖ್ಯರಸ್ತೆಗೆ "ಡಾ॥ ಶ್ಯಾಮಾಪ್ರಸಾದ ಮುಖರ್ಜಿ ರಸ್ತೆ" ಎಂದು ನಾಮಕರಣ ಮಾಡಲು ಕೋರಿರುತ್ತಾರೆ. ಸದರಿ ವಿಷಯ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳು ನಾಮಕರಣ ಮಾಡಲು ಆದೇಶಿಸಿರುತ್ತಾರೆ.

ಈ ಸಂಬಂಧ ಪರಿಶೀಲಿಸಲಾಗಿ, ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ 1976, 293ನೇ ಪ್ರಕರಣ (1) ನೇ ಉಪ ಪ್ರಕರಣದ ಅನುಸಾರ ಪ್ರಥಮ ಹಂತದಲ್ಲಿ ನಾಮಕರಣ ಮಾಡುವ ಸಂಬಂಧ ಪಂಚನಾಮೆ ಜರುಗಿಸಲಾಗಿ ಪ್ರಸ್ತಾವನೆ ಪರವಾಗಿ 15 ಮಂದಿ, ವಿರೋಧವಾಗಿ 5 ಮಂದಿ ಸಹಿ ಮಾಡಿರುವುದು ಕಂಡು ಬಂದಿದೆ. ಸದರಿ ವಿಷಯದ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳುವಲ್ಲಿ ಮಾನ್ಯ ಆಡಳಿತಗಾರರ ಮುಂದೆ ಟಿಪ್ಪಣಿಯನ್ನು ಮಂಡಿಸಲಾಗಿದ್ದು, ದಿನಾಂಕ:13-01-2010 ರಂದು ಮಾನ್ಯ ಆಡಳಿತಗಾರರು ವಿಷಯದ ಸಂಖ್ಯೆ: 546/2009-10 ರಲ್ಲಿ ಯಶವಂತಪುರ 1ನೇ ಮುಖ್ಯರಸ್ತೆಗೆ "ಡಾ॥ ಶ್ಯಾಮಾಪ್ರಸಾದ ಮುಖರ್ಜಿ ರಸ್ತೆ" ಎಂದು ನಾಮಕರಣ ಮಾಡುವುದೆಂದು ತೀರ್ಮಾನಿಸಿರುತ್ತಾರೆ.

ಸದರಿ ವಿಷಯದ ಸಂಬಂಧವಾಗಿ, ಸಾರ್ವಜನಿಕರು ಆಕ್ಷೇಪಣೆಗಳು/ಸಲಹೆಗಳು ಇದ್ದಲ್ಲಿ ಸಲ್ಲಿಸಲು ತಿಳಿಸಿ, ಪತ್ರಿಕಾ ಪ್ರಕಟಣೆಯನ್ನು ದಿನಾಂಕ:01-02-2010 ರಲ್ಲಿ ಹೊರಡಿಸಲಾಗಿರುತ್ತದೆ. ಸದರಿ ಪತ್ರಿಕಾ ಪ್ರಕಟಣೆಯು ಹೊರಡಿಸಲಾದ 30 ದಿನಗಳ ಕಾಲಾವಕಾಶದಲ್ಲಿ, ಆಕ್ಷೇಪಣೆ ಸಲ್ಲಿಸಲು ಅವಕಾಶಗಳು ಇದ್ದು, ಈ ಅವಧಿಯಲ್ಲಿ ಶ್ರೀ. ಸಿ.ಸೋಮಶೇಖರ್ (ಸೋಮಣ್ಣ), ಶ್ರೀ. ಶ್ರೀನಿವಾಸ್, ವಕೀಲರು, ಅಧ್ಯಕ್ಷರು, ಕನ್ನಡ ಕಣ್ಮಣಿ ಡಾ॥ ರಾಜ್ ಸಾಂಸ್ಕೃತಿಕ ಸಂಸ್ಥೆ (ನೋಂ) ಹಾಗೂ ಚಿಕ್ಕಪೇಟೆ ಕ್ಷೇತ್ರ ಕರ್ನಾಟಕ ರಕ್ಷಣಾ ವೇದಿಕೆ ರವರು ಆಕ್ಷೇಪಣೆ ಅರ್ಜಿಗಳನ್ನು ಸಲ್ಲಿಸಿ ನಾಮಕರಣ ಮಾಡಲು ಉದ್ದೇಶಿಸಲಾಗಿರುವ ರಸ್ತೆಗೆ ಈಗಾಗಲೇ 1995ನೇ ಸಾಲಿನಲ್ಲಿ ವಿಧಾನ ಸಭಾ ಸದಸ್ಯರಾದ ಶ್ರೀ. ಬಿ.ನಾರಾಯಣಸ್ವಾಮಪ್ಪರವರ ಹೆಸರನ್ನು ನಾಮಕರಣ ಮಾಡಿರುವುದರಿಂದ ಈ ಪ್ರಸ್ತಾವನೆಯನ್ನು ಕೈಬಿಡಬೇಕೆಂದು ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

ಮುಂದುವರೆದಂತೆ, ಮಾನ್ಯ ಶಾಸಕರಾದ ಡಾ॥ ಅಶ್ವತ್ ನಾರಾಯಣ್.ಸಿ.ಎನ್. ರವರು ದಿನಾಂಕ:08-02-2010 ರಂದು ಮತ್ತೊಂದು ಮನವಿ ಪತ್ರವನ್ನು ಜಂಟಿ ಆಯುಕ್ತರು (ಪಶ್ಚಿಮ) ರವರಿಗೆ ಸಲ್ಲಿಸಿ ವಾರ್ಡ್ ಸಂಖ್ಯೆ:7, ಯಶವಂತಪುರ 1ನೇ ಮುಖ್ಯರಸ್ತೆಗೆ "ಡಾ॥ ಶ್ಯಾಮಾಪ್ರಸಾದ ಮುಖರ್ಜಿ ರಸ್ತೆ" ಎಂದು ನಾಮಕರಣ ಮಾಡಲು ನಿರ್ಣಯ ಕೈಗೊಂಡಿರುವುದನ್ನು ಕೈಬಿಡಲು ಹಾಗೂ ಮತ್ತೀಕೆರೆ ಮೇಲು ಸೇತುವೆಗೆ "ಡಾ॥ ಶ್ಯಾಮಾಪ್ರಸಾದ ಮುಖರ್ಜಿ" ರವರ ಹೆಸರನ್ನು ನಾಮಕರಣ ಮಾಡಲು ಕೋರಿರುತ್ತಾರೆ.

ಈ ಸಂಬಂಧ ಪರಿಶೀಲಿಸಲಾಗಿ ಡಾ॥ ಶ್ಯಾಮಾಪ್ರಸಾದ ಮುಖರ್ಜಿ ರವರು ಜವಹಾರ್‌ಲಾಲ್ ನೆಹರು ರವರ ಸಂಪುಟದಲ್ಲಿ ಸಚಿವರಾಗಿದ್ದು, ಸ್ವಾತಂತ್ರ್ಯ ಹೋರಾಟಗಾರರಾಗಿ ತುಂಬಾ ಪ್ರಾಮುಖ್ಯತೆವುಳ್ಳವರಾಗಿರುತ್ತಾರೆ.

..........................2

ಈ ಬಗ್ಗೆ ಸಾರ್ವಜನಿಕ ಪಂಚನಾಮೆ ಜರುಗಿಸಲಾಗಿ ಪ್ರಸ್ತಾವನೆ ಪರವಾಗಿ 35 ಮಂದಿ, ವಿರೋಧವಾಗಿ 5 ಮಂದಿ ಸಹಿ ಮಾಡಿರುವುದು ಕಂಡು ಬಂದಿದೆ.

ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ 19769, 293 ನೇ ಪ್ರಕರಣದ (1) ನೇ ಉಪ ಪ್ರಕರಣದ ಅನುಸಾರ ಪ್ರತಿಯೊಂದು ಪ್ರಸ್ತಾವನೆಯನ್ನು ಸಂಬಂಧಪಟ್ಟ ಸ್ಥಾಯಿ ಸಮಿತಿಯು 5, 6 ಮತ್ತು 7ನೇ ನಿಯಮಗಳ ಉಪಬಂಧಗಳ ದೃಷ್ಟಿಯಿಂದ ಪರಿಶೀಲಿಸತಕ್ಕದ್ದು ಮತ್ತು ನಗರ ಪಾಲಿಕೆಯು ಗೊತ್ತುವಳಿಯನ್ನು ಅಂಗೀಕರಿಸತಕ್ಕದ್ದು. ಅನಂತರ ಅದನ್ನು, ಕನಿಷ್ಠ ಎರಡು ವೃತ್ತ ಪತ್ರಿಕೆಗಳಲ್ಲಿ ವಿಶೇಷವಾಗಿ, ಕನ್ನಡ ಪತ್ರಿಕೆಗಳಲ್ಲಿ, ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳಿಗೆ ಮಾಹಿತಿಗಾಗಿ ಮತ್ತು ಅದು ಪ್ರಕಟವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸತಕ್ಕದ್ದು. ಮೇಲೆ ಹೇಳಿಕೆ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಮತ್ತು ಸಲಹೆಗಳು ಬಂದರೆ, ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಪರಿಶೀಲಿಸುವುದಕ್ಕಾಗಿ ನಗರ ಪಾಲಿಕೆಯ ಮುಂದಿನ ಸಭೆಯಲ್ಲಿ ಅವುಗಳನ್ನು ಮಂಡಿಸತಕ್ಕದ್ದು. ರಾಜ್ಯ ಸರ್ಕಾರದ ಯಾವುದೇ ನಿರ್ದೇಶನಗಳಿದ್ದರೆ ಅವುಗಳಿಗೆ ಒಳಪಟ್ಟು ಗೊತ್ತುವಳಿಯನ್ನು ಅಂಗೀಕರಿಸಿದ ಮೇಲೆ ಅದರಂತೆ ನಗರ ಪಾಲಿಕೆಯ ಬೀದಿಗೆ ನಾಮಕರಣ ಮಾಡುವುದಕ್ಕೆ ಕ್ರಮ ಕೈಗೊಳ್ಳತಕ್ಕದ್ದೆಂದು ಉಲ್ಲೇಖಿಸಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರ ವಿಷಯದ ಸಂಖ್ಯೆ:546/2009-10 ದಿನಾಂಕ:13-01-2010 ರಲ್ಲಿ ತೀರ್ಮಾನಿಸಿರುವ ನಡವಳಿಯನ್ನು ರದ್ದುಪಡಿಸುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:36 (ಹಳೆಯ ವಾರ್ಡ್ ಸಂಖ್ಯೆ:4) ಮತ್ತೀಕೆರೆ ಮೆಲು ಸೇತುವೆಗೆ "ಡಾ॥ ಶ್ಯಾಮಾಪ್ರಸಾದ ಮುಖರ್ಜಿ" ರವರ ಹೆಸರನ್ನು ನಾಮಕರಣ ಮಾಡುವ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:18-09-2010 ರ ಟಿಪ್ಪಣಿ.

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಆಯುಕ್ತರವರ ದಿನಾಂಕ:18-09-2010 ರ ಟಿಪ್ಪಣಿಯನ್ನು ಒಪ್ಪುವುದು".

ಶ್ರೀ.ಗಂಗಭೈರಯ್ಯ ರವರು, ಶ್ರೀ.ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಆಯುಕ್ತರವರ ದಿನಾಂಕ:18-09-2010ರ ಟಿಪ್ಪಣಿಯನ್ನು ಒಪ್ಪುವುದೆಂದು ತೀರ್ಮಾನಿಸಲಾಯಿತು".

Dayanand. N

(ಎನ್.ದಯಾನಂದ್)
ಉಪ ಮಹಾಪೌರರು

# ದಿನಾಂಕ:27-11-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ವಿಷಯ

**ವಿಷಯದ ಸಂಖ್ಯೆ: 150/2010-11**

ಟಿಪ್ಪಣಿಯಲ್ಲಿ ವಿವರಿಸಿರುವಂತೆ, ಶ್ರೀ ರಮೇಶ್.ಎನ್.ಆರ್. ನಗರ ಪಾಲಿಕೆ ಸದಸ್ಯರು, ವಾರ್ಡ್ ಸಂಖ್ಯೆ: 167 ರವರು ದಿನಾಂಕ:15-10-2010 ರಂದು ಪೂಜ್ಯ ಮಹಾಪೌರರಿಗೆ ಮನವಿ ಪತ್ರ ಸಲ್ಲಿಸಿ, ಯಡಿಯೂರು ತರಕಾರಿ ಮಾರ್ಕೆಟ್ ಮುಂಭಾಗದಲ್ಲಿರುವ ಮೂರು ರಸ್ತೆಗಳು ಕೂಡುವ ವೃತ್ತಕ್ಕೆ "ದಿವಂಗತ ಶ್ರೀ ಬೇಟಪ್ಪ ವೃತ್ತ" ಎಂದು ನಾಮಕರಣ ಮಾಡಲು ಕೋರಿರುತ್ತಾರೆ ಹಾಗೂ ದಿನಾಂಕ:18-10-2010 ರ ಪೂಜ್ಯ ಮಹಾಪೌರರ ಟಿಪ್ಪಣಿಯಲ್ಲಿ ಸದರಿ ವೃತ್ತಕ್ಕೆ ನಾಮಕರಣ ಮಾಡುವ ಬಗ್ಗೆ ನಗರಪಾಲಿಕೆಯ ಸಭೆಯ ಮುಂದೆ ಸೂಕ್ತ ಪ್ರಸ್ತಾವನೆಯನ್ನು ಮಂಡಿಸಲು ಸೂಚಿಸಿರುತ್ತಾರೆ.

ಈ ಬಗ್ಗೆ ಪರಿಶೀಲಿಸಲಾಗಿ ಶ್ರೀ ಬೇಟಪ್ಪರವರು ಗಾಂಧಿವಾದಿಗಳಾಗಿ, 1960 ರಿಂದ 1988 ನೇ ಸಾಲಿನವರೆಗೆ ಸುಮಾರು 28 ವರ್ಷಗಳ ಕಾಲ ನಗರಸಭಾ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದು, ದಿವಂಗತರಾಗಿರುತ್ತಾರೆ.

ಈ ಬಗ್ಗೆ ಸಾರ್ವಜನಿಕ ಪಂಚನಾಮೆ ಜರುಗಿಸಲಾಗಿ ಪ್ರಸ್ತಾವನೆ ಪರವಾಗಿ 59 ಮಂದಿ, ವಿರೋಧವಾಗಿ ಯಾರು ಸಹಿ ಮಾಡದೇ ಇರುವುದು ಕಂಡು ಬಂದಿದೆ.

ಕರ್ನಾಟಕ ಮುನಿಸಿಪಲ್ ಕಾರ್ಪೊರೇಷನ್ ಕಾಯ್ದೆ 1976, 293ನೇ ಪ್ರಕರಣದ (1) ನೇ ಉಪ ಪ್ರಕರಣದ ಅನುಸಾರ ಪ್ರತಿಯೊಂದು ಪ್ರಸ್ತಾವನೆಯನ್ನು ಸಂಬಂಧಪಟ್ಟ ಸ್ಥಾಯಿ ಸಮಿತಿಯು 5, 6 ಮತ್ತು 7ನೇ ನಿಯಮಗಳ ಉಪಬಂಧಗಳ ದೃಷ್ಟಿಯಿಂದ ಪರಿಶೀಲಿಸತಕ್ಕದ್ದು ಮತ್ತು ನಗರಪಾಲಿಕೆಯು ಗೊತ್ತುವಳಿಯನ್ನು ಅಂಗೀಕರಿಸತಕ್ಕದ್ದು. ಆನಂತರ ಅದನ್ನು ಕನಿಷ್ಠ ಎರಡು ವೃತ್ತ ಪತ್ರಿಕೆಗಳಲ್ಲಿ ವಿಶೇಷವಾಗಿ, ಕನ್ನಡ ಪತ್ರಿಕೆಗಳಲ್ಲಿ, ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳಿಗೆ ಮಾಹಿತಿಗಾಗಿ ಮತ್ತು ಅದು ಪ್ರಕಟವಾದ ದಿನಾಂಕದಿಂದ ಮೂವತ್ತು ದಿನಗಳೊಳಗಾಗಿ ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಆಹ್ವಾನಿಸಿ ಪ್ರಕಟಿಸತಕ್ಕದ್ದು. ಮೇಲೆ ಹೇಳಿಕೆ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಮತ್ತು ಸಲಹೆಗಳು ಬಂದರೆ, ಆಕ್ಷೇಪಣೆಗಳು ಮತ್ತು ಸಲಹೆಗಳನ್ನು ಪರಿಶೀಲಿಸುವುದಕ್ಕಾಗಿ ನಗರಪಾಲಿಕೆಯ ಮುಂದಿನ ಸಭೆಯಲ್ಲಿ ಅವುಗಳನ್ನು ಮಂಡಿಸತಕ್ಕದ್ದು. ರಾಜ್ಯ ಸರ್ಕಾರದ ಯಾವುದೇ ನಿರ್ದೇಶನಗಳಿದ್ದರೆ ಅವುಗಳಿಗೆ ಒಳಪಟ್ಟು ಗೊತ್ತುವಳಿಯನ್ನು ಅಂಗೀಕರಿಸಿದ ಮೇಲೆ ಅದರಂತೆ ನಗರ ಪಾಲಿಕೆಯ ಬೀದಿಗೆ ನಾಮಕರಣ ಮಾಡುವುದಕ್ಕೆ ಕ್ರಮ ಕೈಗೊಳ್ಳತಕ್ಕದ್ದೆಂದು ಉಲ್ಲೇಖಿಸಲಾಗಿದೆ.

ಆದುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ವಾರ್ಡ್ ಸಂಖ್ಯೆ:167 ರ ವ್ಯಾಪ್ತಿಯಲ್ಲಿ ಬರುವ ಯಡಿಯೂರು ತರಕಾರಿ ಮಾರುಕಟ್ಟೆ ಮುಂಭಾಗದಲ್ಲಿರುವ ಮೂರು ರಸ್ತೆಗಳು ಕೂಡುವ ವೃತ್ತಕ್ಕೆ "ಶ್ರೀ ಬೇಟಪ್ಪ ವೃತ್ತ" ಎಂದು ನಾಮಕರಣ ಮಾಡುವ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲು ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಮುಂದೆ ಮಂಡಿಸಿರುವ ಆಯುಕ್ತರವರ ದಿನಾಂಕ:15-11-2010 ರ ಟಿಪ್ಪಣಿ ಹಾಗೂ ಸದರಿ ಟಿಪ್ಪಣಿಯನ್ನು ಒಪ್ಪಿರುವ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ದಿನಾಂಕ:26-11-2010 ರ ನಿರ್ಣಯ.

....................2

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ದಿನಾಂಕ:26-11-2010 ರ ನಿರ್ಣಯವನ್ನು ಒಪ್ಪುವುದು".

ಶ್ರೀ.ಗಂಗಭೈರಯ್ಯ ರವರು, ಶ್ರೀ.ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ದಿನಾಂಕ:26-11-2010 ರ ನಿರ್ಣಯವನ್ನು ಒಪ್ಪುವುದೆಂದು ಸಭೆಯು ಸರ್ವಾನುಮತದಿಂದ ತೀರ್ಮಾನಿಸಲಾಯಿತು".

(ಎನ್.ದಯಾನಂದ್)
ಉಪ ಮಹಾಪೌರರು